ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮನೋರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. **(ಅನುಬಂಧ – II)**

(iii) 2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲಾಯಿತು."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. **(ಅನುಬಂಧ – III)**

ಆ. ವಿಧೇಯಕಗಳ ಪರ್ಯಾಲೋಚನೆ ಮತ್ತು ಅಂಗೀಕಾರ

(i) ಕರ್ನಾಟಕ ಧನ ವಿನಿಯೋಗ (ಸಂಖ್ಯೆ–3) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ **"2005ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸುವುದು".**

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : ಪ್ರಸ್ತಾವ ಏನೆಂದರೆ : "ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು